**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಸಿ.ಸಿ. ಸಂಖ್ಯೆ : 25/2025**

**ಚಾ.ಸಾಃ 14, ಫ್ರಾ.ಸಾಃ 4**

| | |
|---|---|
| ಸಾಕ್ಷಿದಾರನ ಹೆಸರು | ಮಂಜುನಾಥ |
| ತಂದೆಯ ಹೆಸರು | ತಿಮ್ಮ ರೆಡ್ಡಪ್ಪ |
| ವಯಸ್ಸು | 35 ವರ್ಷಗಳು |
| ಉದ್ಯೋಗ | ಆರಕ್ಷಕ ಉಪ-ನಿರೀಕ್ಷಕರು, ಹೊನ್ನಾವರ ಪೋಲೀಸ್ ಠಾಣೆ |
| ವಾಸ್ತವ್ಯ | ಹೊನ್ನಾವರ |

**ಸಾಕ್ಷಿಯನ್ನು ದಿನಾಂಕಃ 06-12-2025 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ಸಪ್ಟೆಂಬರ್-2024 ರಿಂದ ಹೊನ್ನಾವರ ಪೋಲೀಸ್ ಠಾಣೆಯಲ್ಲಿ ಆರಕ್ಷಕ ಉಪ-ನಿರೀಕ್ಷಕನಾಗಿ ಕೆಲಸ ಮಾಡುತ್ತಿದ್ದೇನೆ.

ದಿನಾಂಕ 28-12-2024 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಮಧ್ಯಾಹ್ನ 03-15 ಗಂಟೆಗೆ ಪಿರ್ಯಾದುದಾರರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಪಡೆದುಕೊಂಡು ಠಾಣಾ ಮೊಕದ್ದಮೆ ನಂ.286/2024 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ದೂರನ್ನು ನೋಡುತ್ತಿದ್ದು ಅದನ್ನು ನಿಪಿ-8 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-8(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ-9 ಎಂದು, ಸಾಕ್ಷಿ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು.

ನಂತರ ಕೇಸಿನ ಕಡತವನ್ನು ಚಾಸಾ-17 ರವರಿಗೆ ವಹಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ವಿ. ಆರ್. ನಾಯ್ಕರಿಂದಃ**

ಪಿರ್ಯಾದುದಾರರು ದೂರು ನೀಡುವ ಪೂರ್ವದಲ್ಲಿ ಅಪಘಾತದ ಮಾಹಿತಿ ಬಂದಿತ್ತೋ ಇಲ್ಲವೋ ನೆನಪಾಗುತ್ತಿಲ್ಲ. ಪಿರ್ಯಾದಿಯನ್ನು ಕಂಪ್ಯುಟರನಲ್ಲಿ ಪಿರ್ಯಾದಿದಾರರೇ ತಯಾರು ಮಾಡಿಕೊಂಡು ತಂದಿದ್ದರು. ಮೃತನ ಕುಟುಂಬಕ್ಕೆ ಸಹಾಯವಾಗಲಿ ಎಂದು ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ: ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**Sd/-**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**